ಆಗಸ್ಟ್ 23ರಿಂದ ಪ್ರಕ್ರಿಯೆ । ದುರುದ್ದೇಶ ಇಲ್ಲ ಎಂದ ಸಚಿವ ಅಶ್ವತ್ಥ ನಾರಾಯಣ

# ಎನ್‌ಇಪಿ ಅಡಿಯಲ್ಲೇ ಪದವಿ ಪ್ರವೇಶ

**ವಿಕ ಸುದ್ದಿಲೋಕ** ಬೆಂಗಳೂರು



ರಾಷ್ಟ್ರೀಯ ಶಿಕ್ಷಣ ನೀತಿ -2020 ಅನುಷ್ಠಾನ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ ನಡೆಯಿತು.

ವಿದ್ಯಾರ್ಥಿಗಳ ಹಿತ ಕಾಯುವುದು ರಾಷ್ಟ್ರೀಯ ಶಿಕ್ಷಣ ನೀತಿಯ ಉದ್ದೇಶ. ನೀತಿ ಜಾರಿಯ ಹಿಂದೆ ದುರುದ್ದೇಶ ಅಥವಾ ಹಿಡನ್ ಅಜೆಂಡಾ ಇಲ್ಲವೆಂದು ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥನಾರಾಯಣ ಸ್ಪಷ್ಟಪಡಿಸಿದರು.

ನಗರದ ಉತ್ತರ ವಿಶ್ವವಿದ್ಯಾಲಯ ಹಾಗೂ ಕ್ರಿಸ್ತ ಜಯಂತಿ ಕಾಲೇಜು ಸಹಯೋಗದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ -2020 ಅನುಷ್ಠಾನ ಕುರಿತು ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿ, ''ಆ. 23ರಿಂದ ಹೊಸ ಶಿಕ್ಷಣ ನೀತಿಯಡಿ ಕಲಿಕೆಗೆ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆ ಆರಂಭಿಸಲಾಗುವುದು. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮತ್ತು ಸಿಎಂ ಬಸವರಾಜ ಬೊಮ್ಮಾಯಿ ಅವರು ಪ್ರವೇಶ ಪ್ರಕ್ರಿಯೆಗೆ ಚಾಲನೆ ನೀಡಲಿದ್ದಾರೆ'' ಎಂದು ತಿಳಿಸಿದರು.

ಶಿಕ್ಷಣ ನೀತಿಯನ್ನು ಆಮೂಲಾಗ್ರ ಅಧ್ಯಯನ ನಡೆಸದೇ, ಸೂಕ್ಷ್ಮತೆ ಗ್ರಹಿಸದೇ ಟೀಕೆ ಮಾಡುವುದು ಸೂಕ್ತವಲ್ಲ, ಶಿಕ್ಷಣ ನೀತಿ ವಿರೋಧಿಸುವುದು ಮತ್ತು ದೇಶದ ಅಭಿವೃದ್ಧಿ ವಿರೋಧಿಸುವುದು ಎರಡೂ ಒಂದೇ ಎಂದು ಸಚಿವರು ಅಭಿಪ್ರಾಯಪಟ್ಟರು.

ವಿಶಾಲ ತಳಹದಿ ಮತ್ತು ದೃಷ್ಟಿಕೋನದಿಂದ ರೂಪಿಸಿರುವ ಶಿಕ್ಷಣ ನೀತಿಯಲ್ಲಿ ಬಹು ಆಯ್ಕೆಯ ಕಲಿಕೆಗೆ ಅವಕಾಶವಿದೆ. ಈ ವರೆಗೆ ಶಿಕ್ಷಕರು/ಪಾಲಕರು ಹೇಳಿದ್ದನ್ನು ವಿದ್ಯಾರ್ಥಿಗಳು ಕಲಿಯುತ್ತಿದ್ದರು. ಭವಿಷ್ಯದಲ್ಲಿ ಅವರ ಇಚ್ಛೆಯ ವಿಷಯವನ್ನು ಕಲಿಯಲು ಅವಕಾಶ ಕಲ್ಪಿಸಲಾಗಿದೆ.

ಪ್ರತಿಯೊಂದು ಸವಾಲಿಗೂ ಶಿಕ್ಷಣ ನೀತಿಯಲ್ಲಿ ಉತ್ತರವಿದೆ. ಶಿಕ್ಷಣವಿರದೇ ಅಭಿವೃದ್ಧಿ ಮರೀಚಿಕೆ. ಆಮೂಲಾಗ್ರ ಮತ್ತು ರಚನಾತ್ಮಕ ಪ್ರಗತಿ ಸಾಧಿಸಬೇಕಿದ್ದರೆ ಶಿಕ್ಷಣಕ್ಕೆ ಒತ್ತು ನೀಡಬೇಕು. ಈ ನಿಟ್ಟಿನಲ್ಲಿ ಜರ್ಮನಿ, ದಕ್ಷಿಣ ಕೊರಿಯಾ, ಜಪಾನ್ ದೇಶಗಳು ಅದ್ಭುತಗಳನ್ನು ಸೃಷ್ಟಿಸಿವೆ'' ಎಂದು ಸಚಿವರು ತಿಳಿಸಿದರು.

ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಬೆಳೆಸಲು, ಅತ್ಯುತ್ತಮವಾಗಿ ರೂಪಿಸಲು ವಿದ್ಯಾರ್ಥಿ ಕೇಂದ್ರಿತ ವ್ಯವಸ್ಥೆ ಸ್ಥಾಪಿಸಲು ಸಲಹೆ ನೀಡಿದ ಸಚಿವರು ಈ ನಿಟ್ಟಿನಲ್ಲಿ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸುವ ಅಗತ್ಯವಿದೆ ಎಂದರು.

ಕ್ರಿಸ್ತ ಜಯಂತಿ ಕಾಲೇಜಿನ ಪ್ರಿನ್ಸಿಪಾಲ್ ಡಾ.ಆಗಸ್ಟಿನ್ ಜಾರ್ಜ್, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತ ಪಿ. ಪ್ರದೀಪ್, ಬೆಂಗಳೂರು ಉತ್ತರ ವಿವಿ ಕುಲಪತಿ ಪ್ರೊ. ಡಿ. ಕುಮುದಾ, ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ.ತಿಮ್ಮೇಗೌಡ ಮಾತನಾಡಿದರು.

ಬೆಂಗಳೂರು ಉತ್ತರ ವಿವಿ ರಿಜಿಸ್ಟ್ರಾರ್ ಡಾ. ವಿ. ವೆಂಕಟೇಶ ಮೂರ್ತಿ, ಕ್ರಿಸ್ತ ಜಯಂತಿ ಕಾಲೇಜಿನ ಡೀನ್ ಡಾ. ಜೆ. ಅಲೋಶಿಯಸ್ ಎಡ್ವರ್ಡ್ ಮುಂತಾದವರು ವಿಚಾರ ಸಂಕಿರಣದಲ್ಲಿ ಭಾಗಿಯಾಗಿದ್ದರು.